ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮೂರನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ,
ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ

E-mail ID: icps.kar@gmail.com Ph.No.080-22867383

ಸಂಖ್ಯೆ:ಮರನಿ/ಮರ/ಸುತ್ತೋಲೆ-26(6)/2021-22 ದಿನಾಂಕ:12-10-2021

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದ ಕಾನೂನು ಬದ್ಧ ವಾರಸುದಾರರಿಗೆ ಪರಿಹಾರ ವಿತರಿಸುವ ಕುರಿತು.

ಉಲ್ಲೇಖ:
1) ಸರ್ಕಾರಿ ಆದೇಶ ಸಂಖ್ಯೆ:ಕಂಇ 400 ಟಿಎನ್ಆರ್ 2021, ದಿನಾಂಕ:28-09-2021.
2) ನಿರ್ದೇಶನಾಲಯ ಸುತ್ತೋಲೆ ಸಂಖ್ಯೆ:ಮರನಿ/ಮರ/ಸುತ್ತೋಲೆ-26(6)/2021-22, ದಿನಾಂಕ:12-10-2021.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರ ನಿರ್ದೇಶನಾಲಯದ ಸುತ್ತೋಲೆಯಲ್ಲಿ ಕೋವಿಡ್-19ರ ಸಾಂಕ್ರಾಮಿಕದಿಂದ ಏಕ/ಇಬ್ಬರು ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಉಲ್ಲೇಖ (1)ರ ಕಂದಾಯ ಇಲಾಖೆಯ ಆದೇಶದಂತೆ ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ಬಡತನ ರೇಖೆಗಿಂತ ಕೆಳಗಿನ ಕುಟುಂಬದ ಒಬ್ಬ ಕಾನೂನು ಬದ್ಧ ವಾರಸುದಾರರಿಗೆ ಸಂಧ್ಯಾ ಸುರಕ್ಷಾ ಯೋಜನೆಯ ರೂ.1.00 ಲಕ್ಷಗಳನ್ನು ಮತ್ತು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕಾನೂನು ಬದ್ಧ ವಾರಸುದಾರರಿಗೆ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಯಿಂದ ರೂ.50,000/- ಗಳನ್ನು ಪಾವತಿಸಲು ಆದೇಶಿಸಲಾಗಿದ್ದು, ಸದರಿ ಆದೇಶದಂತೆ ಕೋವಿಡ್-19ರ ಸಾಂಕ್ರಾಮಿಕದಿಂದ ಏಕ/ಇಬ್ಬರು ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಅರ್ಹ ಪರಿಹಾರ ಸಿಗುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಈ ಯೋಜನೆಯಡಿ ನಿಮ್ಮ ಜಿಲ್ಲೆಯಲ್ಲಿ ಪ್ರಯೋಜನ ಪಡೆದ ಏಕ/ಇಬ್ಬರು ಪೋಷಕರನ್ನು ಕೋವಿಡ್-19ರ ಸಾಂಕ್ರಾಮಿಕದಿಂದ ಕಳೆದುಕೊಂಡ ಮಕ್ಕಳ ಮಾಹಿತಿಯನ್ನು ಮಗುವಾರು ಎರಡು ವಾರದ ಒಳಗಾಗಿ ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ. ಕಂದಾಯ ಇಲಾಖೆಯ ಆದೇಶ ಹಾಗೂ ನಿರ್ದೇಶನಾಲಯದ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸಿದೆ.

ಆದ್ದರಿಂದ, ಸದರಿ ಪರಿಹಾರದ ಮೊತ್ತವು ಕೋವಿಡ್-19ರಿಂದ ಏಕ/ಇಬ್ಬರು ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಸಿಗುವಂತೆ ಅಗತ್ಯ ಕ್ರಮ ವಹಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,
12.10.2021
ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

2.....

ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ :

1. ಎಲ್ಲಾ ಜಿಲ್ಲೆಯ ಸರ್ಕಾರಿ, ಸರ್ಕಾರಿ ಅನುದಾನಿತ ಹಾಗೂ ಖಾಸಗಿ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರು/ಮುಖ್ಯಸ್ಥರು.
2. ಎಲ್ಲಾ ಜಿಲ್ಲೆಯ ಸಹಾಯಕ ಮಕ್ಕಳ ರಕ್ಷಣಾಧಿಕಾರಿಗಳು
3. ಶಾಖಾ ರಕ್ಷಣಾ ಕಡತ
4. ಕಛೇರಿ ಕಡತ

ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮೂರನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ,
ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ

**E-mail ID: icps.kar@gmail.com** **Ph.No.080-22867383**

ಸಂಖ್ಯೆ:ಮರನಿ/ಮರ/ಸುತ್ತೋಲೆ-26(6)/2021-22 ದಿನಾಂಕ:12-10-2021

## ಸುತ್ತೋಲೆ

ವಿಷಯ: ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದ ಕಾನೂನು ಬದ್ಧ ವಾರಸುದಾರರಿಗೆ ಪರಿಹಾರ ವಿತರಿಸುವ ಕುರಿತು.

ಉಲ್ಲೇಖ:
1) ಸರ್ಕಾರಿ ಆದೇಶ ಸಂಖ್ಯೆ:ಕಂಇ 400 ಟಿಎನ್ಆರ್ 2021, ದಿನಾಂಕ:28-09-2021.
2) ಕೇಂದ್ರ ಗೃಹ ಮಂತ್ರಾಲಯದ ಪತ್ರ ಸಂಖ್ಯೆ:33-04 /2020-NDM-1, ದಿನಾಂಕ:25-09-2021.

* * * * *

ಉಲ್ಲೇಖದ ಸರ್ಕಾರದ ಆದೇಶದಲ್ಲಿ ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ಬಡತನ ರೇಖೆಗಿಂತ ಕೆಳಗಿನ ಕುಟುಂಬದ ಒಬ್ಬ ಕಾನೂನು ಬದ್ಧ ವಾರಸುದಾರರಿಗೆ ಸಂಧ್ಯಾ ಸುರಕ್ಷಾ ಯೋಜನೆಯ ರೂ.1.00 ಲಕ್ಷಗಳನ್ನು ಮತ್ತು ಉಲ್ಲೇಖ (2)ರ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕೋವಿಡ್-19ರ ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕಾನೂನು ಬದ್ಧ ವಾರಸುದಾರರಿಗೆ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಯಿಂದ ರೂ.50,000/- ಗಳನ್ನು ಪಾವತಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

ಆದ್ದರಿಂದ, ಕೋವಿಡ್-19ರ ಸಾಂಕ್ರಾಮಿಕದಿಂದ ಏಕ/ಇಬ್ಬರು ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಮೇಲಿನ ಆದೇಶದಂತೆ ಅರ್ಹ ಪರಿಹಾರ ಸಿಗುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಈ ಯೋಜನೆಯಡಿ ನಿಮ್ಮ ಜಿಲ್ಲೆಯಲ್ಲಿ ಪ್ರಯೋಜನ ಪಡೆದ ಏಕ/ಇಬ್ಬರು ಪೋಷಕರನ್ನು ಕೋವಿಡ್-19ರ ಸಾಂಕ್ರಾಮಿಕದಿಂದ ಕಳೆದುಕೊಂಡ ಮಕ್ಕಳ ಮಾಹಿತಿಯನ್ನು ಮಗುವಾರು ಎರಡು ವಾರದ ಒಳಗಾಗಿ ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಿದೆ.

12.10.2021

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ :

1. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
2. ಎಲ್ಲಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ.
3. ಎಲ್ಲಾ ಜಿಲ್ಲೆಯ ಸರ್ಕಾರಿ, ಸರ್ಕಾರಿ ಅನುದಾನಿತ ಹಾಗೂ ಖಾಸಗಿ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರು/ಮುಖ್ಯಸ್ಥರು.
4. ಎಲ್ಲಾ ಜಿಲ್ಲೆಯ ಬಾಲನ್ಯಾಯ ಮಂಡಳಿ/ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು/ಸದಸ್ಯರು.
5. ಶಾಖಾ ರಕ್ಷಣಾ ಕಡತ
6. ಕಛೇರಿ ಕಡತ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೋವಿಡ್-19 ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದ ವಾರಸುದಾರರಿಗೆ ಪರಿಹಾರ ವಿತರಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಕಂಇ 294 ಟಿಎನ್ಆರ್ 2021, ದಿನಾಂಕ:08.07.2021.
2) ಸರ್ಕಾರದ ಆದೇಶ ಸಂಖ್ಯೆ: ಕಂಇ 400 ಟಿಎನ್ಆರ್ 2021, ದಿನಾಂಕ:23.09.2021.
3) ಸರ್ಕಾರದ ಆದೇಶ ಸಂಖ್ಯೆ: ಕಂಇ 400 ಟಿಎನ್ಆರ್ 2021, ದಿನಾಂಕ:28.09.2021.
4) ಕೇಂದ್ರ ಗೃಹ ಮಂತ್ರಾಲಯದ ಪತ್ರ ಸಂಖ್ಯೆ: 33-04/2020-NDM-I, ದಿನಾಂಕ:25.09.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ವೈರಾಣು ಸೋಂಕಿನಿಂದಾಗಿ ದುಡಿಯುವ ಸದಸ್ಯರನ್ನು ಕಳೆದುಕೊಂಡಂತಹ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕುಟುಂಬಕ್ಕೆ ಆಸರೆ ನೀಡುವ ನಿಟ್ಟಿನಲ್ಲಿ ರೂ.1.00 ಲಕ್ಷ ಪರಿಹಾರವನ್ನು ರಾಜ್ಯ ಸರ್ಕಾರದಿಂದ ಸಂಧ್ಯಾ ಸುರಕ್ಷಾ ಯೋಜನೆಯಡಿ ಅರ್ಹ ಸಂತ್ರಸ್ಥ ಕುಟುಂಬದ ಕಾನೂನು ಬದ್ಧ ವಾರಸುದಾರರಿಗೆ ಪಾವತಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ದಿನಾಂಕ:23.09.2021ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ವೈರಾಣು ಸೋಂಕಿನಿಂದಾಗಿ ದುಡಿಯುವ ಸದಸ್ಯರನ್ನು ಕಳೆದುಕೊಂಡಂತಹ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕುಟುಂಬದ ಅರ್ಹ ಕಾನೂನು ಬದ್ಧ ವಾರಸುದಾರರಿಗೆ ರೂ.1.00 ಲಕ್ಷಗಳ ಪರಿಹಾರ ಧನವನ್ನು ಜಿಲ್ಲಾಧಿಕಾರಿಗಳ ಜಿಲ್ಲಾ ವಿಪತ್ತು ಪರಿಹಾರ ನಿಧಿ (DDRF) ಪಿ.ಡಿ.ಖಾತೆಯಲ್ಲಿ ಪ್ರಸ್ತುತ ಲಭ್ಯವಿರುವ ಅನುದಾನದಿಂದ ವಿತರಿಸಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಿ ಆದೇಶಿಸಲಾಗಿದ್ದನ್ನು ಮೇಲೆ ಓದಲಾದ (3) ರ ದಿನಾಂಕ:28.09.2021ರ ಆದೇಶದಲ್ಲಿ ಹಿಂಪಡೆಯಲಾಗಿದೆ.

ಮೇಲೆ ಓದಲಾದ (4)ರ ಕೇಂದ್ರ ಗೃಹ ಮಂತ್ರಾಲಯದ ಪತ್ರದಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ (NDMA) ವತಿಯಿಂದ ದಿನಾಂಕ:11.09.2021 ರಂದು ಹೊರಡಿಸಿರುವ ಮಾರ್ಗಸೂಚಿಗಳ ಪ್ರಕಾರ ಕೋವಿಡ್-19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದ ಅರ್ಹ ವಾರಸುದಾರರಿಗೆ ರೂ.50,000/- ಗಳ ಪರಿಹಾರವನ್ನು ರಾಜ್ಯ ವಿಪತ್ತು ಪರಿಹಾರ ನಿಧಿಯಡಿ ನೀಡಲು ಆದೇಶಿಸಲಾಗಿದೆ.

ಪ್ರಸ್ತುತ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೇಂದ್ರ ಸರ್ಕಾರದ ನಿರ್ದೇಶನಗಳಂತೆ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಂಇ 400 ಟಿಎನ್ಆರ್ 2021, ದಿನಾಂಕ:28-09-2021.

(1) ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ಘೋಷಿಸಿರುವಂತೆ ಕೋವಿಡ್ ನಿಂದ ಮೃತಪಟ್ಟ ಬಡತನ ರೇಖೆಗಿಂತ ಕೆಳಗಿನ ಕುಟುಂಬದ ಒಬ್ಬ ಕಾನೂನು ಬದ್ಧ ವಾರಸುದಾರರಿಗೆ "ಸಂಧ್ಯಾ ಸುರಕ್ಷಾ ಯೋಜನೆ" ಯಡಿ ರೂ.1.00 ಲಕ್ಷಗಳನ್ನು ಪಾವತಿಸಲು;

ಮತ್ತು

(2) ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕೋವಿಡ್-19 ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕಾನೂನು ಬದ್ಧ ವಾರಸುದಾರರಿಗೆ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಯಿಂದ ರೂ.50,000/- ಗಳನ್ನು ಪಾವತಿಸಲು; ಅನುಮತಿ ನೀಡಿ ಆದೇಶಿಸಿದೆ.

...2

ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಕೋವಿಡ್-19 ವೈರಾಣು ಸೋಂಕಿನಿಂದ ಮೃತಪಟ್ಟ ವ್ಯಕ್ತಿಗಳ ಕಾನೂನು ಬದ್ಧ ವಾರಸುದಾರರಿಗೆ ರೂ.50,000/- ಗಳನ್ನು ಪಾವತಿಸಲು "ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಲೆಕ್ಕ ಶೀರ್ಷಿಕೆ:2245-80-102-0-01-059 (ಇತರೆ ವೆಚ್ಚಗಳು)" ರಡಿ ರೂ.200.00 ಕೋಟಿಗಳನ್ನು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಇವರು ಖಜಾನೆ-2 ರಡಿ ತಮ್ಮ ಡಿ.ಡಿ.ಓ ಕೋಡ್ ನ್ನು ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಲೆಕ್ಕ ಶೀರ್ಷಿಕೆ:2245-80-102-0-01-059 (ಇತರೆ ವೆಚ್ಚಗಳು) ಕ್ಕೆ ಮ್ಯಾಪಿಂಗ್ ಮಾಡಿಕೊಳ್ಳತಕ್ಕದ್ದು.

ಬಿಡುಗಡೆಯಾದ ಅನುದಾನದಡಿ ಅರ್ಹ ಮೃತ ವ್ಯಕ್ತಿಗಳ ಕಾನೂನು ಬದ್ಧ ವಾರಸುದಾರರಿಗೆ ನೇರ ನಗದು ವರ್ಗಾವಣೆ (DBT) ಮೂಲಕ ಮರಣ ಪರಿಹಾರ ಧನವನ್ನು ಸಂದಾಯ ಮಾಡತಕ್ಕದ್ದು.

ಪರಿಹಾರ ಪಾವತಿಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಅನುಬಂಧದಲ್ಲಿ ಒದಗಿಸಿದ್ದು ಅದರಂತೆ ಅಗತ್ಯ ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 579 ವೆಚ್ಚ-7/2021, ದಿನಾಂಕ:18.09.2021 ರಲ್ಲಿ ನೀಡಿರುವ ಸಹಮತದನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಸಿ.ಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಹಾಗೂ ನೋಂ & ಮು)

**ಗೆ,**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ ಬೆಂಗಳೂರು.
7. ಎಲ್ಲಾ ಜಿಲ್ಲೆಗಳ ಜಿಲ್ಲಾ ವೈದ್ಯಾಧಿಕಾರಿಗಳು.
8. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ, (ಸೇವೆಗಳು-3, ಭೂಸುಧಾರಣಾ ಕೋಶ, ಕೆ.ಎ.ಟಿ, ಬಾಡಿಗೆ ನಿಯಂತ್ರಣ ಹಾಗೂ ಸಾಮಾಜಿಕ ಭದ್ರತೆ & ಪಿಂಚಣಿಗಳು) ಬಹುಮಹಡಿ ಕಟ್ಟಡ, ಬೆಂಗಳೂರು,
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು,
10. ಜಂಟಿ ನಿರ್ದೇಶಕರು, ಟಿಎನ್‌ಎಂಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು,
11. ಎಲ್ಲಾ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

...3